**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2017-18** **ದಿನಾಂಕ: 19-07-2017**

# ಪತ್ರಿಕಾ ಆಮಂತ್ರಣ

1. ಶ್ರೀ ಕಂಠೀರವ ಕ್ರೀಡಾಂಗಣ ನವೀಕರಣಗೊಂಡ ಒಳಾಂಗಣ ಕ್ರೀಡಾಂಗಣದ ಪರಿವೀಕ್ಷಣೆ:

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ಪ್ರಮೋದ್ ಮಧ್ವರಾಜ್, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

ದಿನಾಂಕ: 20-07-2017, ಗುರುವಾರ, ಸಮಯ: ಬೆಳಿಗ್ಗೆ 10.00 ಗಂಟೆಗೆ
ಸ್ಥಳ: ಶ್ರೀ ಕಂಠೀರವ ಒಳಾಂಗಣ ಕ್ರೀಡಾಂಗಣ, ಬೆಂಗಳೂರು.

**2. ಕಲಾವಿದರಾದ ಎಸ್.ಎಂ. ಪಂಡಿತ್ ಮತ್ತು ಕಲಾವಿಮರ್ಶಕರಾದ ಬಿ.ವಿ.ಕೆ. ಶಾಸ್ತ್ರಿ: ಜನ್ಮಶತಮಾನೋತ್ಸವ ಸಮಾರಂಭ :**

<u>ಅಧ್ಯಕ್ಷತೆ:</u>
ಡಾ. ಎಂ.ಎಸ್. ಮೂರ್ತಿ, ಅಧ್ಯಕ್ಷರು, ಕರ್ನಾಟಕ ಲಲಿತಕಲಾ ಅಕಾಡೆಮಿ.

ದಿನಾಂಕ: 20-07-2017, ಗುರುವಾರ ಸಮಯ: ಬೆಳಿಗ್ಗೆ 11-00 ಗಂಟೆಗೆ.
ಸ್ಥಳ: "ವರ್ಣ ಆರ್ಟ್ ಗ್ಯಾಲರಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.

3. ಡಾ. ಬಿ.ಆರ್. ಅಂಬೇಡ್ಕರ್ ಅಂತಾರಾಷ್ಟ್ರೀಯ ಸಮ್ಮೇಳನ ಅಂಗವಾಗಿ ವಸ್ತು ಪ್ರದರ್ಶನ ಉದ್ಘಾಟನೆ ಮತ್ತು ಪತ್ರಿಕಾಗೋಷ್ಠಿ:

ಉಪಸ್ಥಿತರು:
ಡಾ: ಹೆಚ್.ಸಿ. ಮಹದೇವಪ್ಪ,
ಲೋಕೋಪಯೋಗಿ ಸಚಿವರು

ಹೆಚ್. ಆಂಜನೇಯ
ಸಮಾಜ ಕಲ್ಯಾಣ ಸಚಿವರು

ಹಾಗೂ ಇತರ ಸಚಿವರುಗಳು

ದಿನಾಂಕ: 20-7-2017 ಗುರುವಾರ, ಸಮಯ: ಸಂಜೆ 4-00 ಗಂಟೆ
ಸ್ಥಳ: ಜಿ.ಕೆ.ವಿ.ಕೆ. ಆವರಣ, ಬೆಂಗಳೂರು

ಪತ್ರಿಕಾ ಪ್ರಕಟಣೆ

# ಡಾ: ಬಿ.ಆರ್. ಅಂಬೇಡ್ಕರ್ ಅಂತಾರಾಷ್ಟ್ರೀಯ ಸಮ್ಮೇಳನ: ಸಾಂಸ್ಕೃತಿಕ ಕಾರ್ಯಕ್ರಮಗಳು

ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರ ಡಾ: ಬಿ.ಆರ್. ಅಂಬೇಡ್ಕರ್ ಅವರ 126 ನೇ ವರ್ಷಾಚರಣೆ ಅಂಗವಾಗಿ ನಗರದ ಜಿ.ಕೆ.ವಿ.ಕೆ. ಆವರಣದಲ್ಲಿ ಹಮ್ಮಿಕೊಂಡಿರುವ "ಡಾ: ಬಿ.ಆರ್. ಅಂಬೇಡ್ಕರ್ ಅಂತಾರಾಷ್ಟ್ರೀಯ ಸಮ್ಮೇಳನ-2017" ನ್ನು ಜುಲೈ 21 ರಂದು ಸಂಜೆ 5-30 ಕ್ಕೆ ಅಂತರ್‌ರಾಷ್ಟ್ರೀಯ ಮಟ್ಟದ ಮಾನವ ಹಕ್ಕುಗಳ ಹೋರಾಟಗಾರ ಹಾಗೂ ಸುಪ್ರಸಿದ್ದ ವಕೀಲ ಮಾರ್ಟಿನ್ ಲೂಥರ್ ಕಿಂಗ್-3 ಅವರು ಉದ್ಘಾಟಿಸಲಿದ್ದಾರೆ ಎಂದು ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ತಿಳಿಸಿದರು.

ಈ ಸಮ್ಮೇಳನದ ಪ್ರಯುಕ್ತ ಹಲವಾರು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಜುಲೈ 20 ರಂದು ರಾಜ್ಯದ 30 ಜಿಲ್ಲೆಗಳಲ್ಲಿ ಏಕಕಾಲಕ್ಕೆ ಸಂಜೆ 6-00 ರಿಂದ 6-30 ರವರೆಗೆ "ಮೂರು ನುಡಿ -ನೂರು ದುಡಿ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು 150 ತಂಡಗಳ 1500 ಚರ್ಮವಾದ್ಯಗಾರರು ವಾದ್ಯಗಳನ್ನು ನುಡಿಸಲಿದ್ದಾರೆ ಹಾಗೂ 60 ತಂಡಗಳ 600 ಗಾಯಕರು ಅಂಬೇಡ್ಕರ್ ಕುರಿತು ಹಾಡುಗಳನ್ನು ಹಾಡಲಿದ್ದಾರೆ ಮತ್ತು 30 ವಿದ್ವಾಂಸರು ಡಾ: ಅಂಬೇಡ್ಕರ್ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಹೇಳಿದರು.

ತಮಿಳುನಾಡಿನ ಮಹಿಳಾ ವಾದ್ಯಗಾರರು ಹಾಗೂ ಬ್ರೆಜಿಲ್‌ನ ಆದಿವಾಸಿ ವಾದ್ಯಗಳನ್ನು ನುಡಿಸುತ್ತಿರುವುದು ವಿಶೇಷ ಆಕರ್ಷಣೆಯಾಗಿದ್ದು ಬೆಂಗಳೂರಿನಲ್ಲಿ ನಡೆಯುವ ಸಮ್ಮೇಳನಕ್ಕೆ ರಾಜ್ಯಾದ್ಯಂತ ಮೆರಗು ತುಂಬಲಿದೆ.

**ಬೀದಿ ನಾಟಕಗಳ ಮೂಲಕ ಅಂಬೇಡ್ಕರ್ ಸಮಾವೇಶಕ್ಕೆ ಚಾಲನೆ:**

ರಂಗಕರ್ಮಿ ಹೆಚ್. ಜನಾರ್ಧನ್ ಅವರ ಮಾರ್ಗದರ್ಶನದಲ್ಲಿ ಮೂರು ಬೀದಿ ನಾಟಕ ತಂಡಗಳಿಗೆ ನಾಡಿನ ಪ್ರಸಿದ್ದ ರಂಗ ನಿರ್ದೇಶಕರುಗಳಿಂದ ಅಂಬೇಡ್ಕರ್ ಕುರಿತು ಬೀದಿ ನಾಟಕಗಳನ್ನು ಹಾಗೂ ಹೋರಾಟದ ಹಾಡುಗಳನ್ನು ಸಿದ್ಧಗೊಳಿಸಲಾಗಿದೆ. ಮೈಸೂರು, ಚಾಮರಾಜನಗರ ಹಾಗೂ ಹಾಸನ ಜಿಲ್ಲೆಗಳಿಂದ ಹೊರಟ ಬೀದಿ ನಾಟಕ ತಂಡಗಳು ಶ್ರೀರಂಗಪಟ್ಟಣ, ಮಂಡ್ಯ, ರಾಮನಗರ, ಕೊಳ್ಳೇಗಾಲ, ಮಳವಳ್ಳಿ, ಕನಕಪುರ, ಅರಕಲಗೂಡು, ಕೆ.ಆರ್. ಪೇಟೆ, ಕುಣಿಗಲ್, ನೆಲಮಂಗಲಗಳಲ್ಲಿ ಪ್ರದರ್ಶನ ನೀಡಿ ಬೆಂಗಳೂರನ್ನು ತಲುಪಿ ನಂತರ ಬೆಂಗಳೂರಿನ ಅನೇಕ ಬಡಾವಣೆಗಳಲ್ಲಿ, ಗ್ರಾಮೀಣ ಪ್ರದೇಶಗಳಲ್ಲಿ ಮತ್ತು ಹಾಸ್ಟೆಲ್‌ಗಳಲ್ಲಿ ದಿನಕ್ಕೆ 3 ರಿಂದ 4 ಪ್ರದರ್ಶನ ನೀಡುವುದರ ಮೂಲಕ ಡಾ: ಬಿ.ಆರ್. ಅಂಬೇಡ್ಕರ್ ಅವರ ಅಂತಾರಾಷ್ಟ್ರೀಯ ಸಮ್ಮೇಳನದ ಬಗ್ಗೆ ಪ್ರಚಾರ ನೀಡಲಾಗುವುದು ಎಂದು ಹೇಳಿದರು.

**ನಾಟಕೋತ್ಸವ:**

ಭಾರತದ ಇತಿಹಾಸದಲ್ಲೇ ಒಂದು ಮೈಲಿಗಲ್ಲಾಗಲಿರುವ ಡಾ: ಬಿ.ಆರ್. ಅಂಬೇಡ್ಕರ್ ಅಂತಾರಾಷ್ಟ್ರೀಯ ಸಮಾವೇಶದ ಅಂಗವಾಗಿ ಅಂಬೇಡ್ಕರ್ ಕುರಿತು 5 ದಿನಗಳ ಅಂಬೇಡ್ಕರ್ ನಾಟಕೋತ್ಸವವನ್ನು ಸಹಾ ಹಮ್ಮಿಕೊಳ್ಳಲಾಗಿದ್ದು ಜುಲೈ 19 ರಿಂದ 24 ರವರೆಗೆ ನಗರದ ಗುರುನಾನಕ್ ಭವನದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂಘರ್ಷಮಯ ಜೀವನದ ಸೂಕ್ಷ್ಮತೆಗಳನ್ನು ಅನಾವರಣಗೊಳಿಸುವ ನಾಟಕಗಳನ್ನು ಹಮ್ಮಿಕೊಳ್ಳಲಾಗಿದೆ.

**ಸಮ್ಮೇಳನದಲ್ಲಿ ಸಾಂಸ್ಕೃತಿಕ ಚಟುವಟಿಕೆಗಳು:**

ಸಮ್ಮೇಳನ ನಡೆಯುವ ಜಿ.ಕೆ.ವಿ.ಕೆ. ಆವರಣದ ಮುಖ್ಯ ಸಭಾಂಗಣದಲ್ಲಿ ಹೋರಾಟದ ಹಾಡುಗಳು, ಹಿಂದೂಸ್ಥಾನಿ ಗಾಯನ, ಭರತ ನಾಟ್ಯ ಹಾಗೂ ವಿವಿಧ ರಾಜ್ಯಗಳ ವಿಶೇಷ ಜಾನಪದ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಹಾ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

## ಆಹಾರ ಇಲಾಖೆಗೆ ಸಾರ್ವಜನಿಕರಿಂದ ದೂರು ಸಲ್ಲಿಸಲು ಅವಕಾಶ

ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ)

ಆಹಾರ ಇಲಾಖೆ, ಅಂಗನವಾಡಿ ಹಾಗೂ ಮಧ್ಯಾಹ್ನದ ಉಪಹಾರ ಯೋಜನೆ ಅಡಿಯಲ್ಲಿ ಪೂರೈಸುವ ದೂರು ಹಾಗೂ ಸಲಹೆಗಳನ್ನು ಆಹಾರ ಆಯೋಗಕ್ಕೆ ಸಲ್ಲಿಸಲು ಸಾರ್ವಜನಿಕರಿಗೆ ತಿಳಿಸಿದೆ.

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ – 2013 ರ ಅಧಿನಿಯಮ 16 ರ ಪ್ರಕಾರ ಸ್ವತಂತ್ರ ಕರ್ನಾಟಕ ರಾಜ್ಯ ಆಹಾರ ಆಯೋಗವು ಸ್ಥಾಪನೆಯಾಗಿದೆ. ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಬೆಂಗಳೂರಿನಲ್ಲಿ ಆಯೋಗದ ಅಧ್ಯಕ್ಷರ ನೇತೃತ್ವದಲ್ಲಿ ಕಾರ್ಯಾರಂಭ ಮಾಡಿದೆ.

ಸಾರ್ವಜನಿಕ ವಿತರಣಾ ಪದ್ದತಿಯಡಿ ಅರ್ಹ ಕುಟುಂಬಗಳ ಸದಸ್ಯರಿಗೆ ಸಹಾಯಧನ ದರದಲ್ಲಿ ಆಹಾರ ಧಾನ್ಯಗಳನ್ನು ಪಡೆಯುವ ಹಕ್ಕು, ಗರ್ಭಿಣಿಯರಿಗೆ ಮತ್ತು ಬಾಣಂತಿಯರಿಗೆ ಉಚಿತವಾಗಿ ಪೌಷ್ಠಿಕಾಂಶಗಳನ್ನು ಒದಗಿಸುವುದು, 14 ವರ್ಷದವರೆಗಿನ ಮಕ್ಕಳಿಗೆ ಅಂಗನವಾಡಿ ಮತ್ತು ಮಧ್ಯಾಹ್ನದ ಉಪಹಾರ ಹಾಗೂ ಪೌಷ್ಠಿಕ ಆಹಾರವನ್ನು ಒದಗಿಸುವುದು. ರಾಜ್ಯದಲ್ಲಿ ಅಪೌಷ್ಠಿಕತೆಯನ್ನು ತಡೆಗಟ್ಟುವುದು ಆಯೋಗದ ಮುಖ್ಯ ಉದ್ದೇಶವಾಗಿದೆ.

ಈ ಆಯೋಗದಲ್ಲಿ ಡಾ. ಎನ್. ಕೃಷ್ಣಮೂರ್ತಿ ಅವರು ಅಧ್ಯಕ್ಷರಾಗಿ, ವಿ.ಬಿ.ಪಾಟೀಲ್, ಹೆಚ್.ವಿ. ಶಿವಶಂಕರ, ಡಿ.ಜಿ. ಹಸಬಿ, ಶ್ರೀಮತಿ ಮಂಜುಳ ಮತ್ತು ಬಿ.ಎ. ಮಹಮದ್ ಅಲಿ ಸದಸ್ಯರಾಗಿ ಹಾಗೂ ಶ್ರೀಮತಿ ಶಾಂತಾ ಎಲ್ ಹುಲ್ಮನಿ ಅವರು ಪದನಿಮಿತ್ತ ಸದಸ್ಯರಾಗಿ ಕಾರ್ಯ ನಿರ್ವಹಿಸಲಿದ್ದಾರೆ.

ಸಾರ್ವಜನಿಕರು ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ : 080 22264966 ಅಥವಾ ಇಮೇಲ್ kastfoodcommi@gmail.com ಗೆ ಮೇಲ್ ಮಾಡಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್

## ಪಾರಂಪರಿಕ ವೈದ್ಯರ ಮಕ್ಕಳಿಗೆ ವಿಶೇಷ ಪ್ರಕರಣದಡಿ ಎರಡು ಸೀಟು ಮೀಸಲು

ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ)

ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡಲು ಭಾರತ ಸರ್ಕಾರದ ಆಯುಷ್ ಮಂತ್ರಾಲಯ, ನವದೆಹಲಿ ಇವರು ಐ.ಸಿ.ಸಿ.ಆರ್. ಕೋಟಾ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ವಿಶೇಷ ಪ್ರಕರಣದಡಿ ಪ್ರವೇಶ ಕಲ್ಪಿಸಿದಂತೆಯೇ ಪಾರಂಪರಿಕ

ವೈದ್ಯರ ಮಕ್ಕಳಿಗೆ ವಿಶೇಷ ಪ್ರಕರಣದಡಿ ಪ್ರವೇಶಾತಿ ಪರಿಗಣಿಸಿ 2017–18 ನೇ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸಿಇಟಿ ಮುಖಾಂತರ ಹಂಚಲ್ಪಡುವ ಸರ್ಕಾರಿ ಕೋಟಾ ಸೀಟುಗಳಲ್ಲಿ ಎರಡು ಸೀಟುಗಳನ್ನು ಮೀಸಲಿರಿಸಿದೆ.

ಇದರನ್ವಯ ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಬಳ್ಳಾರಿ ಹಾಗೂ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಮೈಸೂರು ಇಲ್ಲಿ ತಲಾ ಒಂದು ಸೀಟನ್ನು ಕಾಯ್ದಿರಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# Kannada Film Festival at Kolkata

Bengaluru, July 19: A Kannada Film Festival is being organized for the first time in Kolkata at Nandan, cultural complex from 21th July to 24 July under the aegis of Karnataka Chalanachitra Academy, Department of Information and Public Relations, Government of Karnataka in collaboration with Federation of Film societies of India.

In an effort to create a unique opportunity for the exchange of two rich cultures of Bengal and Karnataka through the common platform of cinema, Karnataka Chalanachitra Academy in association with Purple Heart foundation had organized Bengali Film Festival in Bengaluru in the month of June .

In continuation with the tradition, Kannada Film Festival is organized in Kolkata. Renowned Kannada Filmmaker Mr.Girish Kasaravalli, Noted Music Director Mr. Hamsalekha, Chairman of Karnataka chalanachitra Academy Mr.S.V.Rajendrasingh Babu, Mr. N.R. Vishukumar, Director of Department of Information and Public Relations, will be participating in the event, informed Mr.H.B.cDinesh Registrar of Karnataka Chalanachitra Academy.

Harikatha Prasanga directed by Ananya Kasaravalli, Amaravathi directed by B.M.Giriraj, U Turn directed by Pawan Kumar, Railway Children directed by Prithvi Konanur, Krik Party-directed by Rishab Shetty and Rama Rama Re – directed by D.Satyaprakash will be screened at the festival. Thithi, directed by Ramareddy, which has been screened at various International Film Festivals and won numerous awards including National Award for best feature film in Kannada and State award for Best feature film will be screened as the inaugural movie.

## ಕೋಲ್ಕತ್ತಾದಲ್ಲಿ ಕನ್ನಡ ಚಲನಚಿತ್ರೋತ್ಸವ

ಬೆಂಗಳೂರು, ಜುಲೈ 19: ಕರ್ನಾಟಕ ಚಲನಚಿತ್ರ ಅಕಾಡೆಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಭಾರತೀಯ ಚಲನಚಿತ್ರ ಸಂಘಗಳ ಒಕ್ಕೂಟದ ಸಹಯೋಗದಲ್ಲಿ ಕೋಲ್ಕತ್ತಾದ ಪ್ರತಿಷ್ಠಿತ ನಂದನ್ ಸಾಂಸ್ಕೃತಿಕ ಕೇಂದ್ರದಲ್ಲಿ ಜುಲೈ 21 ರಿಂದ 24 ರವರೆಗೆ 3 ದಿನಗಳ ಕನ್ನಡ ಚಲನಚಿತ್ರೋತ್ಸವವನ್ನು ಹಮ್ಮಿಕೊಳ್ಳಲಾಗಿದೆ.

ಖ್ಯಾತ ಚಲನಚಿತ್ರ ನಿರ್ದೇಶಕ ಶ್ರೀ ಗಿರೀಶ್ ಕಾಸರವಳ್ಳಿ, ಖ್ಯಾತ ಸಂಗೀತ ನಿರ್ದೇಶಕ ಶ್ರೀ ಹಂಸಲೇಖ, ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಶ್ರೀ ರಾಜೇಂದ್ರ ಸಿಂಗ್ ಬಾಬು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಶ್ರೀ ಎನ್.ಆರ್.ವಿಶುಕುಮಾರ್ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಶ್ರೀ ಹೆಚ್.ಬಿ.ದಿನೇಶ್ ತಿಳಿಸಿದ್ದಾರೆ.

ಅನನ್ಯಾ ಕಾಸರವಳ್ಳಿ ನಿರ್ದೇಶನದ ಹರಿಕಥಾ ಪ್ರಸಂಗ, ಬಿ.ಎಂ.ನಿರ್ದೇಶನದ ಅಮರಾವತಿ, ಪವನ್ ಕುಮಾರ್ ನಿರ್ದೇಶನದ ಯು-ಟರ್ನ್, ಪೃಥ್ವಿ ಕೊಣನೂರು ನಿರ್ದೇಶನದ ರೈಲ್ವೆ ಚಿಲ್ಡ್ರನ್, ರಿಷಬ್ ಶೆಟ್ಟಿ ನಿರ್ದೇಶನದ ಕಿರಿಕ್ ಪಾರ್ಟಿ, ಡಿ.ಸತ್ಯಪ್ರಕಾಶ್ ನಿರ್ದೇಶನದ ರಾಮಾ ರಾಮಾ ರೇ ಚಿತ್ರಗಳನ್ನು ಚಿತ್ರೋತ್ಸವದಲ್ಲಿ ಪ್ರದರ್ಶಿಸಲಾಗುವುದು.

ಹಲವಾರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಪ್ರದರ್ಶನ ಕಂಡಿರುವ ಹಾಗೂ ರಾಷ್ಟ್ರ ಮತ್ತು ರಾಜ್ಯ ಪ್ರಶಸ್ತಿಗಳನ್ನು ಪಡೆದಿರುವ ತಿಥಿ ಚಿತ್ರ ಉದ್ಘಾಟನಾ ಚಿತ್ರವಾಗಿ ಪ್ರದರ್ಶಿಸಲಾಗುತ್ತಿದೆ.

**<u>ಸರ್ಕಾರಿ ಹಾಗೂ ಅನುದಾನಿತ ವೈದ್ಯಕೀಯ, ಇಂಜಿನಿಯರಿಂಗ್,</u>**
**<u>ಪದವಿ ಹಾಗೂ ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಪಡೆದು</u>**
**<u>ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್ ವಿತರಣೆ : ಟಿ ಬಿ ಜಯಚಂದ್ರ</u>**

**<u>ಬೆಂಗಳೂರು, ಜುಲೈ 19 ( ಕರ್ನಾಟಕ ವಾರ್ತೆ) :</u>**

ಪ್ರಸಕ್ತ ಸಾಲಿನಲ್ಲಿ ಸರ್ಕಾರಿ ಹಾಗೂ ಅನುದಾನಿತ ವೈದ್ಯಕೀಯ, ಇಂಜಿನಿಯರಿಂಗ್, ಪದವಿ ಹಾಗೂ ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಪಡೆದು ಪ್ರಥಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಎರಡೂವರೆ ಲಕ್ಷ ರೂ ಗಳಿಗೂ ಕಡಿಮೆ ವಾರ್ಷಿಕ ಕೌಟುಂಬಿಕ ಆದಾಯವಿರುವ ಎಲ್ಲಾ ಸಮುದಾಯಗಳ ವಿದ್ಯಾರ್ಥಿಗಳಿಗೂ ಉಚಿತ ಲ್ಯಾಪ್‌ಟಾಪ್ ವಿತರಿಸಲು ರಾಜ್ಯ ಸಚಿವ ಸಂಪುಟವು ತೀರ್ಮಾನಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ರಾಜ್ಯ ಸಚಿವ ಸಂಪುಟ ಸಭೆಯ ನಂತರ ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ ಅವರು ಈ ವಿಷಯವನ್ನು ಪತ್ರಿಕಾಗೋಷ್ಠಿಯಲ್ಲಿ ಬಹಿರಂಗಗೊಳಿಸಿದರು.

ಸುಮಾರು 300 ಕೋಟಿ ರೂ ವೆಚ್ಚದಲ್ಲಿ ಅನುಷ್ಠಾನಗೊಳಿಸಲಿರುವ ಈ ಯೋಜನೆ ಒಂದೂವರೆ ಲಕ್ಷ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ಅವರು ಹೇಳಿದರು.

ಬರದ ಮೇಲೆ ಬರೆ ! ಬದಲಾದ ಕೇಂದ್ರದ ಮಾರ್ಗಸೂಚಿ, ಮರು ಪರಿಶೀಲನೆಗೆ ಮನವಿ ಸಲ್ಲಿಸಲು ನಿರ್ಧಾರ

ಬರ ಪೀಡಿತ ಪ್ರದೇಶ ಎಂದು ಘೋಷಿಸಲು ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯ ಮಾರ್ಗಸೂಚಿಗಳನ್ನು ಬದಲಾವಣೆ ಮಾಡಿರುವ ಹಿನ್ನೆಲೆಯಲ್ಲಿ ಉಂಟಾಗಿರುವ ಸಮಸ್ಯೆಗಳನ್ನು ರಾಜ್ಯ ಸಚಿವ ಸಂಪುಟವು ಸುದೀರ್ಘವಾಗಿ ಚರ್ಚಿಸಿತು.

ಈ ಹಿಂದೆ ಸತತವಾಗಿ ನಾಲ್ಕು ವಾರಗಳ ಕಾಲ ಮಳೆ ಇಲ್ಲದೆ ಒಣ ಹವೆ ಇದ್ದಲ್ಲಿ ಬರ ಪೀಡಿತ ಪ್ರದೇಶ ಎಂದು ಘೋಷಿಸಬಹುದಾಗಿತ್ತು. ಆದರೆ, ಶೇಕಡಾ 50 ಕ್ಕಿಂತಲೂ ಕಡಿಮೆ ಪ್ರಮಾಣದಲ್ಲಿ ಮಳೆಯಾಗಿರಬೇಕು ಹಾಗೂ ಅಂತರ್ಜಲದ ಪ್ರಮಾಣದಲ್ಲಿನ ಕುಸಿತವನ್ನೂ ಗಮನದಲ್ಲಿಸಿಕೊಂಡು ಬರಪೀಡಿತ ಪ್ರದೇಶವನ್ನು ಘೋಷಿಸಲು ನಿರ್ಧರಿಸುವ ಬದಲಾದ ಮಾರ್ಗಸೂಚಿಗಳನ್ನು ಅವಲೋಕಿಸಿದಾಗ ಕೇಂದ್ರ ಸರ್ಕಾರವು ತನ್ನ ಹೊಣೆಗಾರಿಕೆಯಿಂದ ಜಾರಿಕೊಳ್ಳಲು ಯತ್ನಿಸುತ್ತಿದೆ ಎಂಬ ಅಭಿಪ್ರಾಯ ಹೊರಹೊಮ್ಮಿದೆ.

ಕಳೆದ ಸಾಲಿನ ಹಿಂಗಾರು ಹಂಗಾಮಿನಲ್ಲಿ ರಾಜ್ಯದ 176 ತಾಲ್ಲುಕುಗಳಲ್ಲಿ 160 ತಾಲ್ಲುಕುಗಳು ಬರಪೀಡಿತ ಎಂದು ಘೋಷಿಸಲಾಗಿತ್ತು. ಆದರೆ, ಬದಲಾದ ಮಾರ್ಗಸೂಚಿಯ ನೂತನ ಮಾನದಂಡಗಳನ್ನು ಅನ್ವಯಿಸಿದರೆ, ಬರಪೀಡಿತ ಎಂದು ಘೋಷಿಸಲು 38 ತಾಲ್ಲುಕುಗಳು ಮಾತ್ರ ಅರ್ಹತೆ ಪಡೆಯುತ್ತವೆ. ಈ ಹಿನ್ನೆಲೆಯಲ್ಲಿ ರಾಜ್ಯದ ಮೇಲೆ ಉಂಟಾಗುವ ಪರಿಣಾಮದ ಸಮಗ್ರ ಚಿತ್ರಣವನ್ನು ವಿವರಿಸಿ ಬದಲಾವಣೆ ಮಾಡಿರುವ ಮಾರ್ಗಸೂಚಿಗಳ ಮರು–ಪರಿಶೀಲನೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲು ಸಂಪುಟ ನಿರ್ಧರಿಸಿತು ಎಂದು ಜಯಚಂದ್ರ ಅವರು ವಿವರಿಸಿದರು.

ಎಲ್ಲೆಲ್ಲೂ ಮಳೆ ಕೊರತೆ

ಜೂನ್ ಮತ್ತು ಜುಲೈ ತಿಂಗಳಲ್ಲಿ ಮಲೆನಾಡು ಪ್ರದೇಶವನ್ನೂ ಒಳಗೊಂಡಂತೆ ರಾಜ್ಯದ ಎಲ್ಲೆಡೆ ವಾಡಿಕೆಗಿಂತಲೂ ಕಡಿಮೆ ಮಳೆಯಾಗಿ, ಮಳೆ ಪ್ರಮಾಣದಲ್ಲಿ ಕೊರತೆ ಉಂಟಾಗಿದೆ. ಕರಾವಳಿ, ಕೊಡಗು ಹಾಗೂ ಮಲೆನಾಡಿನ ಕೆಲವು ಪ್ರದೇಶಗಳಲ್ಲಿ ಕಳೆದ ಎರಡು ದಿನಗಳಿಂದ ಮಳೆಯಾಗುತ್ತಿರುವುದು ನೆಮ್ಮದಿ ತಂದಿದೆ. ತುಮಕೂರು ಮತ್ತು ಹಾಸನ ಜಿಲ್ಲೆಗಳಲ್ಲಿ ಪ್ರಾರಂಭಿಸಲಾಗಿದ್ದ ಗೋಶಾಲೆಗಳು ಸಧ್ಯಕ್ಕೆ ಸ್ಥಗಿತಗೊಂಡಿದೆ. ಆದರೆ, ಚಿತ್ರದುರ್ಗ ಜಿಲ್ಲೆಯಲ್ಲಿ ಗೋಶಾಲೆಗಳು ನಡೆಯುತ್ತಿದೆ. ಹೈನುಗಾರಿಕೆಯಲ್ಲಿ ತೊಡಗಿರುವವರು ನೀರಾವರಿ ಪಂಪ್ ಸೆಟ್‌ಗಳ ನೆರವಿನಿಂದ ಮೇವು ಉತ್ಪಾದಿಸಲು ಕ್ಷಿಪ್ರವಾಗಿ ಬೆಳೆಯುವ ಬೀಜಗಳನ್ನು ವಿತರಿಸಲಾಗಿದೆ ಎಂದರು.

ಗಾಳಿ ಅನುಹುತಕ್ಕೂ ಪರಿಹಾರದ ಬೇಡಿಕೆ

ಇತ್ತೀಚೆಗೆ ಆಶಾಢದ ಗಾಳಿಯಿಂದ ಉಂಟಾಗಿರುವ ಅನುಹುತಕ್ಕೂ ಪರಿಹಾರ ಒದಗಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲು ಸಂಪುಟ ತೀರ್ಮಾನಿಸಿದೆ. ತೆಂಗು ಇಳುವರಿಯಲ್ಲಿ ಶೇಕಡಾ 33 ರಷ್ಟು ಅಂದರೆ 1,20, 755 ಹೆಕ್ಟೇರ್ ಹಾಗೂ ಅಡಿಕೆ ಇಳುವರಿಯಲ್ಲಿ ಶೇಕಡಾ 31 ರಷ್ಟು ಅಂದರೆ 39,170 ಹೆಕ್ಟೇರ್ ನಷ್ಟ ಉಂಟಾಗಿದೆ ಎಂದು ರಾಜ್ಯದ ರಾಜಧಾನಿಗೆ ತಲುಪಿರುವ ಮೊದಲ ಮಾಹಿತಿಯಾಗಿದೆ ಎಂದು ಜಯಚಂದ್ರ ಅವರು ಹೇಳಿದರು.

ಸುಧಾರಿತ ತಾಂತ್ರಿಕತೆ ಅಳವಡಿಸಿಕೊಂಡು ಬೇಸಾಯ ಮಾಡುವ ರೈತರ ಖಾತೆಗಳಿಗೆ ಪ್ರೋತ್ಸಾಹ ಧನ ನೇರ ಜಮೆ

ಆಯವ್ಯಯದಲ್ಲಿ ಘೋಷಿಸಿದಂತೆ ಸುಧಾರಿತ ತಾಂತ್ರಿಕತೆ ಅಳವಡಿಸಿಕೊಂಡು ಬೇಸಾಯ ಮಾಡುವ ರೈತ ಸಮುದಾಯಗಳಿಗೆ 130.23 ಕೋಟಿ ರೂ ಪ್ರೋತ್ಸಾಹ ಧನವನ್ನು ರೈತರ ಖಾತೆಗಳಿಗೆ ನೇರವಾಗಿ ಜಮೆ ಮಾಡಲು ರಾಜ್ಯ ಸಚಿವ ಸಂಪುಟ ತೀರ್ಮಾನಿಸಿದೆ. ಕೃಷಿಗೆ ಪೂರಕವಾಗಿ ಯಾಂತ್ರಿಕ ಬಿತ್ತನೆ, ನೀರು ಉಳಿಸುವಿಕೆ, ಅಂತರ್ಬೆಳೆಯಂತಹ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದನ್ನು ರೈತ ಸಮುದಾಯದಲ್ಲಿ ಪ್ರೋತ್ಸಾಹಿಸಿ, ಕೃಷಿಕರಲ್ಲಿ ಆರೋಗ್ಯಕರ ಸ್ಪರ್ಧೆಗೆ ಅವಕಾಶ ಮತ್ತು ವೇದಿಕೆ ಕಲ್ಪಿಸಲು ಆಧುನಿಕ ತಂತ್ರಜ್ಞಾನ ಬಳಕೆ ಮಾಡಿಕೊಳ್ಳಲು ಅಗತ್ಯವಾದ ಪ್ರೋತ್ಸಾಹ ನೀಡುವ ಈ ಕಾರ್ಯಕ್ರಮವನ್ನು ಅನುಷ್ಠಾನಕ್ಕೆ ತರಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಗ್ರಾಮೀಣ ರಸ್ತೆ ನಿರ್ವಹಣೆಗೆ ಹೊಸ ನೀತಿ

ಈಶ್ವರ ಖಂಡ್ರೆ ವರದಿಯ ಶಿಫಾರಸ್ಸುಗಳನ್ನು ಆಧರಿಸಿ ರಾಜ್ಯದ ಎಲ್ಲಾ ಗ್ರಾಮೀಣ ರಸ್ತೆಗಳ ನಿರ್ವಹಣೆ ಕುರಿತಂತೆ ಹೊಸ ನೀತಿ ಜಾರಿಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಅದರಲ್ಲಿ 66,374 ಕಿ ಮೀ ಡಾಂಬರು ರಸ್ತೆಗಳು, 23,059 ಕಿ ಮೀ ಜಲ್ಲಿ ರಸ್ತೆಗಳು, 25,567 ಕಿ ಮೀ ಗ್ರಾವೆಲ್ ರಸ್ತೆಗಳು ಹಾಗೂ 65,542 ಕಿ ಮೀ ಮಣ್ಣಿನ ರಸ್ತೆಗಳನ್ನು ಒಳಗೊಂಡಂತೆ 1,80,542 ಕಿ ಮೀ ರಸ್ತೆಗಳನ್ನು ಜನ ಹಾಗೂ ಸಂಚಾರ ಸಾಂದ್ರತೆಯನ್ನು ಆಧರಿಸಿ ಅಭಿವೃದ್ಧಿಪಡಿಸಲು ಯೋಜಿಸಲಾಗಿದೆ. ಗ್ರಾಮೀಣ ಭಾಗದಲ್ಲಿ ರಸ್ತೆ ನಿರ್ಮಾಣದ ಗುತ್ತಿಗೆ ಪಡೆದವರು ಐದು ವರ್ಷಗಳ ಅವಧಿಗೆ ಅದರ ನಿರ್ವಹಣೆ ಮಾಡುವ ಕರಡು ನೀತಿಗೆ ಸಂಪುಟ ಒಪ್ಪಿಗೆ ನೀಡಿದೆ.

ರಾಜ್ಯದ 146 ತಾಲ್ಲೂಕು ಆಸ್ಪತ್ರೆಗಳಲ್ಲಿ ವೆಂಟಿಲೇಟರ್ ಸೌಲಭ್ಯ

ರಾಜ್ಯದಲ್ಲಿರುವ 146 ತಾಲ್ಲೂಕು ಆಸ್ಪತ್ರೆಗಳಲ್ಲಿ ತಲಾ ಮೂರು-ಹಾಸಿಗೆಗಳ ಸಾಮರ್ಥ್ಯದ ವೆಂಟಿಲೇಟರ್ ಸೌಲಭ್ಯವಿರುವ ತೀವ್ರ ನಿಗಾ ಘಟಕಗಳನ್ನು ಪ್ರಾರಂಭಿಸಲು ಸಚಿವ ಸಂಪುಟವು ಆಡಳಿತಾತ್ಮಕ ಅನುಮೋದನೆ ನೀಡಿದೆ. ಇದಕ್ಕೆ ಅಗತ್ಯವಿರುವ 45.48 ಕೋಟಿ ರೂ ವೆಚ್ಚವನ್ನು ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಿಂದ ತಲಾ 15 ಲಕ್ಷ ರೂ ಹಾಗೂ ಸಂಸದರ ಪ್ರದೇಶಾಭಿವೃದ್ಧಿ ನಿಧಿಯಿಂದ ಐದು ಲಕ್ಷ ರೂ ಪಡೆದುವೈದ್ಯಕೀಯ ಉಪಕರಣಗಳು ಹಾಗೂ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸಂಪುಟವು ಸಮ್ಮತಿಸಿದೆ.

ಕೈಮಗ್ಗ ಅಭಿವೃದ್ಧಿ ನಿಗಮಕ್ಕೆ ಸಾಲ ಪಡೆಯಲು ಪ್ರತಿ ಖಾತರಿ

ರಾಜ್ಯದ ಕೈಮಗ್ಗ ಅಭಿವೃದ್ಧಿ ನಿಗಮವು ಒಕ್ಕೂಟ ಬ್ಯಾಂಕ್‌ಗಳಿಂದ ಏಪ್ರಿಲ್ 1, 2017 ರಿಂದ ಮಾರ್ಚ್ 31, 2018 ರ ವರೆಗೆ ಒಂದು ವರ್ಷಗಳ ಅವಧಿಗೆ ಪಡೆಯುವ 27 ಕೋಟಿ ರೂ ಸಾಲಕ್ಕೆ ರಾಜ್ಯ ಸರ್ಕಾರ ಪ್ರತಿ ಖಾತರಿ ನೀಡಲು ಸಂಪುಟ ಅನುಮೋದನೆ ನೀಡಿದೆ.

ನಿರ್ಮಲ ಮತ್ತು ಸ್ಫೂರ್ತಿ ಕಿಟ್ ಖರೀದಿಸಲು ಒಪ್ಪಿಗೆ

ರಾಜ್ಯದ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆ ಮತ್ತು ಪದವಿಪೂರ್ವ ಶಾಲೆಗಳ ವಿದ್ಯಾರ್ಥಿ ನಿಲಯಗಳಿಗೆ ರಾಜ್ಯ ಸರ್ಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ಸಂಸ್ಥೆಯಿಂದ 15.70 ಕೋಟಿ ರೂ ವೆಚ್ಚದಲ್ಲಿ ನಿರ್ಮಲ ಮತ್ತು ಸ್ಫೂರ್ತಿ ಕಿಟ್ ಖರೀದಿಸಲು ಸಂಪುಟವು ಒಪ್ಪಿಗೆ ನೀಡಿದೆ. ಆರನೇ ತರಗತಿಯಿಂದ ಹತ್ತನೇ ತರಗತಿಯವರೆಗೆ ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಪ್ರಾರಂಭಿಸಿರುವ 220 ವಸತಿ ಶಾಲೆಗಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳೂ ಒಳಗೊಂಡಂತೆ 1.25 ಲಕ್ಷ ಫಲಾನುಭವಿಗಳಿಗೆ ಸರ್ಕಾರದ ಈ ನಿರ್ಧಾರದಿಂದ ಲಾಭವಾಗಲಿದೆ. ಸಮವಸ್ತ್ರ, ಪಠ್ಯ ಪುಸ್ತಕಗಳ ಜೊತೆಗೆ ಈ ಯೋಜನೆಯಡಿ ಕೊಬ್ಬರಿ ಎಣ್ಣೆ, ಸಾಬೂನು, ಟೂತ್ ಪೇಸ್ಟ್ ಒದಗಿಸಲಾಗುತ್ತದೆ.

ಪ್ರವಾಸೋದ್ಯಮ ಉತ್ತೇಜನಕ್ಕೆ ಮೆಟ್ರೋದೊಂದಿಗೆ ಒಪ್ಪಂದ

ಬೆಂಗಳೂರಿನ ನಮ್ಮ ಮೆಟ್ರೋ ರೈಲು ನಿಲ್ದಾಣಗಳಲ್ಲಿ ರಾಜ್ಯ ಪ್ರವಾಸೋದ್ಯಮವನ್ನು ಉತ್ತೇಜಿಸಲು ಮುಂದಿನ ಐದು ವರ್ಷಗಳ ಅವಧಿಗೆ ಒಟ್ಟಾರೆ 37.88 ಕೋಟಿ ರೂ ಹಾಗೂ ಇತರ ತೆರಿಗೆಗಳಿಗೆ ಸಂಬಂಧಿಸಿದಂತೆ ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತದೊಂದಿಗೆ ಒಪ್ಪಂದ ಮಾಡಿಕೊಳ್ಳಲು ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ. ಪ್ರತಿದಿನವೂ ಎರಡು ಲಕ್ಷಕ್ಕೂ ಹೆಚ್ಚು ಜನರು ನಮ್ಮ ಮೆಟ್ರೋದಲ್ಲಿ ಪ್ರಯಾಣಿಸುವ ಹಿನ್ನೆಲೆಯಲ್ಲಿ ರಾಜ್ಯದ ಪ್ರಮುಖ ಪ್ರೇಕ್ಷಣೀಯ ತಾಣಗಳ ಆಕರ್ಷಕ ಚಿತ್ರಗಳನ್ನು ಪ್ರದರ್ಶಿಸಲು ಈ ಒಡಂಬಡಿಕೆ ಅವಕಾಶ ಕಲ್ಪಿಸಲಿದೆ

ಒಳಚರಂಡಿ ವ್ಯವಸ್ಥೆ ಹಾಗೂ ತ್ಯಾಜ್ಯ ನೀರು ಸಂಸ್ಕರಣಾ ಘಟಕ ನಿರ್ಮಾಣ ಅನುಮೋದನೆ

ಬೆಂಗಳೂರಿನ ಹೆಸರುಘಟ್ಟಕ್ಕೆ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಕಾಮಗಾರಿಗಳಿಗೆ ಹಾಗೂ ತ್ಯಾಜ್ಯ ನೀರು ಸಂಸ್ಕರಣಾ ಘಟಕ ನಿರ್ಮಾಣಕ್ಕೆ 37.28 ಕೋಟಿ ರೂ ಅಂದಾಜು ವೆಚ್ಚಕ್ಕೆ ಸಚಿವ ಸಂಪುಟವು ಆಡಳಿತಾತ್ಮಕ ಅನುಮೋದನೆ ನೀಡಿದೆ. ಇದರಿಂದ ಕೈಗಾರಿಕಾ ತ್ಯಾಜ್ಯಗಳ ಸಂಸ್ಕರಣೆಗೆ ಅನುಕೂಲವಾಗಲಿದೆ ಎಂದು ಜಯಚಂದ್ರ ಅವರು ಮಾಹಿತಿ ನೀಡಿದರು.

ಭೂ ಬ್ಯಾಂಕ್ ಸ್ಥಾಪನೆಗೆ ಒಪ್ಪಿಗೆ

ಕಂದಾಯ ಇಲಾಖೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತಿತರ ರಾಜ್ಯ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ಭೂಸ್ವಾಧೀನ ಮಾಡಿಕೊಳ್ಳಲು ಹಾಗೂ ಭೂ ಬ್ಯಾಂಕ್ ಸ್ಥಾಪಿಸಲು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದೆ. ಕಂದಾಯ, ನಗಾಭಿವೃದ್ಧಿ ಇಲಾಖೆ, ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂಎರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳು ಈ ಸಮಿತಿಯ ಸದಸ್ಯರಾಗಿರುತ್ತಾರೆ.

ಬೆಂಗಳೂರು ಮಹಾನಗರದ ಮೂಲ ಸೌಲಭ್ಯ ಅಭಿವೃದ್ಧಿ ಯೋಜನೆಗಳಿಗೆ ಅಗತ್ಯವಿರುವ ರಕ್ಷಣಾ ಮಂತ್ರಾಲಯಕ್ಕೆ ಸೇರಿದ ಜಮೀನನ್ನು ವಿನಿಮಯದ ಮೂಲಕ ಪಡೆದು ಕೊಳ್ಳಲು ಹಾಗೂ ಸರ್ಕಾರದ ಸ್ವಾಧೀನದಲ್ಲಿರುವ ಭೂಮಿಯನ್ನು ರಕ್ಷಣಾ ಇಲಾಖೆಗೆ ಹಸ್ತಾಂತರಿಸಲು ಈ ಸಮಿತಿ ಅಧಿಕಾರ ಹೊಂದಿರುವುದರಿಂದ ನಗರದಲ್ಲಿ ಮೂಲ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಹಾಗೂ ಸಂಬಂಧಿತ ಕಾಮಗಾರಿಗಳನ್ನು ಕ್ಷಿಪ್ರವಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗುತ್ತದೆ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಜಮೀನು ಮಂಜೂರು

ಬೆಂಗಳೂರು ನಗರದ ಅರ್ಕಾವತಿ ಬಡಾವಣೆ ಹಾಗೂ ನಾಡಪ್ರಭು ಕೆಂಪೇಗೌಡ ಬಡಾವಣೆ ನಿರ್ಮಾಣಕ್ಕಾಗಿ ಭೂಸ್ವಾಧೀನಕ್ಕೆ ಒಳಪಟ್ಟಿರುವ 197.09 ಎಕರೆ ಸರ್ಕಾರಿ ಕೆರೆ, ಕೆರೆ ಅಂಗಳ ಮತ್ತು ಕೆರೆ-ಕಟ್ಟೆಯಂತಹ ಎಲ್ಲಾ ಜಲಕಾಯಗಳ ಜಮೀನನ್ನು ಹಾಗೂ 182.13 ಎಕರೆ ಗೋಮಾಳ ಜಮೀನನ್ನು ಒಟ್ಟಾರೆ 379.22 ಎಕರೆ ಪ್ರದೇಶವನ್ನು ಸಾರ್ವಜನಿಕ ಸೊತ್ತಾಗಿ ಸಂರಕ್ಷಣೆ ಹಾಗೂ ನಿರ್ವಹಣೆ ಮಾಡಬೇಕು ಎಂಬ ಪೂರ್ವ ಒಪ್ಪಂದದ ಷರತ್ತಿನ ಮೇರೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಮಂಜೂರು ಮಾಡಲು ಸಂಪುಟ ನಿರ್ಧರಿಸಿದೆ.

ಕರ್ನಾಟಕ ಅನಿಮೇಷನ್, ವಿಷುವಲ್ ಎಫೆಕ್ಟ್ಸ್ ಗೇಮಿಂಗ್ ಅಂಡ್ ಕಾಮಿಕ್ಸ್ ಪಾಲಿಸಿ

ರಾಜ್ಯ ಆಯವ್ಯಯದಲ್ಲಿ ಘೋಷಿಸಿದಂತೆ ಕರ್ನಾಟಕ ಅನಿಮೇಷನ್, ವಿಷುವಲ್ ಎಫೆಕ್ಟ್ಸ್ ಗೇಮಿಂಗ್ ಅಂಡ್ ಕಾಮಿಕ್ಸ್ ಪಾಲಿಸಿ 2017-2022 ರ ಐದು ವರ್ಷಗಳ ಪರಿಷ್ಕೃತ ನೀತಿಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ನೀತಿಯಿಂದ ಬಂಡವಾಳ ಹೂಡಿಕೆಯಲ್ಲಿ ವೃದ್ಧಿ, 20,000 ಕ್ಕೂ ಉದ್ಯೋಗ ಸೃಷ್ಟಿ, ಜಾಗತಿಕ ಮಟ್ಟದಲ್ಲಿ ಕೌಶಲ್ಯ ಅಭಿವೃದ್ಧಿ, ಕೇವಲ ರಾಜ್ಯದ ರಾಜಧಾನಿ ಮಾತ್ರವಲ್ಲದೆ, ಎರಡನೇ ಹಂತದ ನಗರಗಳಲ್ಲೂ ನವೋದ್ಯಮಗಳ (ಸ್ಟಾರ್ಟ್ ಅಪ್ಸ್) ಪ್ರಾರಂಭವಾಗಿ, ಆದಾಯ ಹಾಗೂ ರಫ್ತು ಪ್ರಮಾಣದಲ್ಲಿ ಗಣನೀಯ ಏರಿಕೆಯಾಗಲಿದೆ.

ಈಶಾನ್ಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಉಚಿತ ಜಮೀನು

ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನಲ್ಲಿ ತೋಟಗಾರಿಕಾ ಇಲಾಖೆಗೆ ಸೇರಿದ ಐದು ಎಕರೆ ಜಮೀನನ್ನು ನೂತನ ಬಸ್ ಘಟಕ ನಿರ್ಮಾಣಕ್ಕಾಗಿ ಈಶಾನ್ಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಉಚಿತವಾಗಿ ನೀಡಲು ಸಂಪುಟ ನಿರ್ಣಯಿಸಿದೆ.

ಕೆರೆ ತುಂಬಿಸುವ ಯೋಜನೆಗೆ ಅನುಮೋದನೆ

ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ವ್ಯಾಪ್ತಿಯ ಹತ್ತು ಗ್ರಾಮಗಳ 17 ಕೆರೆಗಳು ಹಾಗೂ ಹೆಚ್ಚುವರಿ 22 ಕೆರೆಗಳಿಗೆ ಕೃಷ್ಣಾ ನದಿಯಿಂದ 0.198 ಟಿ ಎಂ ಸಿ ನೀರನ್ನು 91.40 ಕೋಟಿ ರೂ ವೆಚ್ಚದಲ್ಲಿ ಕೆರೆ ತುಂಬಿಸುವ ಯೋಜನೆಗೆ ರಾಜ್ಯ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

**ತಂತ್ರಜ್ಞಾನ ಕೇಂದ್ರ ಸ್ಥಾಪನೆಗೆ 15 ಎಕರೆ ಜಾಗ ಒದಗಿಸಲು ಸಮ್ಮತಿ**

ತುಮಕೂರು ಜಿಲ್ಲೆಯ ತುಮಕೂರು ತಾಲ್ಲೂಕಿನ ಕಸಬಾ ಹೋಬಳಿಯ ಅಮಲಾಪುರ ಗ್ರಾಮದಲ್ಲಿ ಕೇಂದ್ರ ಸರ್ಕಾರದ ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳ ತಂತ್ರಜ್ಞಾನ ಕೇಂದ್ರ ಸ್ಥಾಪಿಸಲು ರಾಜ್ಯ ಸರ್ಕಾರ 15 ಎಕರೆ ಜಾಗವನ್ನು ಉಚಿತವಾಗಿ ಒದಗಿಸಲು ಸಂಪುಟ ಸಮ್ಮತಿಸಿದೆ.

**ಬಹುಗ್ರಾಮ ಕುಡಿಯುವ ನೀರು ಯೋಜನೆ**

ಕೊಪ್ಪಳ ಜಿಲ್ಲೆಯ ಕುಷ್ಟಗಿ ಹಾಗೂ ಯಲಬುರ್ಗಾ ತಾಲ್ಲೂಕುಗಳಲ್ಲಿ ಬಹುಗ್ರಾಮ ಕುಡಿಯುವ ನೀರು ಯೋಜನೆಗಳ ಅನುಷ್ಠಾನಕ್ಕೆ 762.30 ಕೋಟಿ ರೂ ಪರಿಷ್ಕೃತ ಅಂದಾಜಿಗೆ ಸಂಪುಟವು ಆಡಳಿತಾತ್ಮಕ ಅನುಮೋದನೆ ನೀಡಿದೆ.

**ವರ್ಷಾಂತ್ಯದೊಳಗೆ ನರಸಾಪುರಕ್ಕೆ ನೀರು**

ಹೆಬ್ಬಾಳದ ದಿನಂಪ್ರತಿ ಮೂರು ದಶಲಕ್ಷ ಲೀಟರ್, ಕೋರಮಂಗಲ-ಚಲ್ಲಘಟ್ಟ ಕಣಿವೆಯ ದಿನಂಪ್ರತಿ 1.5 ದಶಲಕ್ಷ ಲೀಟರ್ ಹಾಗೂ ವೃಷಭಾವತಿ ಕಣಿವೆಯ ದಿನಂಪ್ರತಿ 15 ದಶಲಕ್ಷ ಲೀಟರ್ ತ್ಯಾಜ್ಯ ನೀರು ಶುದ್ಧೀಕರಣ ಘಟಕ ಯೋಜನೆಯ ಹತ್ತು ವರ್ಷ ನಿರ್ವಹಣೆಗೆ ಮೂರು ಬಾರಿ ಟೆಂಡರ್ ಆಹ್ವಾನಿಸಿದರೂ ಯಾವುದೇ ಸ್ಪಂದನೆ ಬಂದಿರಲಿಲ್ಲ. ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳು ಹಾಗೂ ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲ್ಲೂಕಿ ಈ ಕಣಿವೆಗಳಿಂದ ನೀರು ಪೂರೈಸುವ ಕಾಮಗಾರಿಗಳು ಈಗಾಗಲೇ ಪ್ರಾರಂಭವಾಗಿರುವ ಹಿನ್ನೆಲೆಯಲ್ಲಿ ಹೆಬ್ಬಾಳ ಕಣಿವೆಯ ಸ್ಥಾಪನಾ ವೆಚ್ಚ 334.35 ಕೋಟಿ ರೂ ಹಾಗೂ ನಿರ್ವಹಣಾ ವೆಚ್ಚ 199.96 ಕೋಟಿ ರೂ ಒಳಗೊಂಡಂತೆ 534.31 ಕೋಟಿ ರೂ, ಕೋರಮಂಗಲ-ಚಲ್ಲಘಟ್ಟ ಕಣಿವೆಗೆ 472 ಕೋಟಿ ರೂ ಹಾಗೂ ವೃಷಭಾವತಿ ಕಣಿವೆಗೆ 656.96 ಕೋಟಿ ರೂ ಮೊತ್ತ ಮಂಜೂರು ಮಾಡಿ, ಸಂಪುಟ ಸಮ್ಮತಿಸಿದೆ

ಅಂತೆಯೇ, ಕೋಲಾರ ಜಿಲ್ಲೆಯ ನರಸಾಪುರಕ್ಕೆ ಕೋರಮಂಗಲ-ಚಲ್ಲಘಟ್ಟ ಕಣಿವೆಯಿಂದ ವರ್ಷಾಂತ್ಯದೊಳಗೆ ನೀರು ಒದಗಿಸಲಾಗುವುದು ಎಂದು ಜಯಚಂದ್ರ ವಿವರ ನೀಡಿದರು.

*************

ಡಿ ಪಿ ಎಂ